# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 19-12-2020 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಸುಂದರೇಶ್ ಸಹಾಯಕ ಅಭಿಯಂತರರು ಯೋಜನೆ.
4. ಶ್ರೀ. ವೆಂಕಟೇಶ್ ಮೂರ್ತಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸದಸ್ಯರು,
5. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

ಅ) ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಿರುವುದು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶದಂತೆ ವಾರ್ಡ್ ನಂ-01ರ ಪ್ರದೇಶಗಳಲ್ಲಿ **ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು, ಪಾದಚಾರಿ ಮಾರ್ಗಗಳನ್ನು ದುರಸ್ಥಿಪಡಿಸಿ ಹೊಸದಾಗಿ ನಿರ್ಮಾಣ ಮಾಡುವ** ಬಗ್ಗೆ ಕ್ರಮ ಕೈಗೊಳ್ಳುವ ಬಗ್ಗೆ ಚರ್ಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ | ಸಹಾಯಕ ಅಬಿಯಂತರರು (ವಾರ್ಡ್ ನಂ-01) |
| 02 | ವಾರ್ಡ್ ನಂ -01ರ ವೆಂಕಟಾಲ ಗ್ರಾಮದಲ್ಲಿರುವ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವಂತೆ ಸಾರ್ವಜನಿಕರು ಕೋರಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ | ಸಹಾಯಕ ಅಬಿಯಂತರರು (ವಾರ್ಡ್ ನಂ-01) |
| 03 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ಡೌನ್ ಬಜಾರ್ ರಸ್ತೆಯ ಚರಂಡಿಯ ಮೇಲೆ ಹಾಗೂ ಸುರಬಿ ಬಡಾವಣೆಯ 2ನೇ ಮುಖ್ಯರಸ್ತೆಗಳಲ್ಲಿ ಚರಂಡಿ ಕಾಮಗಾರಿ ನಡೆಯುತ್ತಿದ್ದು, ಕಲ್ವರ್ಟ್‌ಗಳ ಮೇಲೆ ಕವರಿಂಗ್ ಸ್ಲ್ಯಾಬ್‌ಗಳನ್ನು ಅಳವಡಿಸುವಂತೆ ಕೋರಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ | ಸಹಾಯಕ ಅಬಿಯಂತರರು (ವಾರ್ಡ್ ನಂ-01) |
| 03 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ನೆಹರು ನಗರದಲ್ಲಿರುವ ಸಾಯಿ ಗೋಲ್ಡ್ ಪ್ಯಾಲೇಸ್ | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್ ನಂ- | ಆರೋಗ್ಯ ವೈದ್ಯಾಧಿಕಾರಿಗಳು |

| | | | |
|---|---|---|---|
| | ಹತ್ತಿರ ಬ್ಲಾಕ್ ಸ್ಪಾಟ್ ತೆರವುಗೊಳಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. | 01) | (ಯಲಹಂಕ ವಲಯ) |
| 04 | ವಾರ್ಡ್ ನಂ -01ರ ರಸ್ತೆಗಳಲ್ಲಿ ಮರದ ರೆಂಬೆಗಳು ರಸ್ತೆಗೆ ಅಡ್ಡವಾಗಿರುವುದರಿಂದ ಸದರಿ ರೆಂಬೆಗಳನ್ನು ಕಟಾವುಮಾಡುವಂತೆ ಸಭೆಯಲ್ಲಿ ಚರ್ಚಿಸಲಾಯಿತು. | ವಲಯ ಅರಣ್ಯಾಧಿಕಾರಿಗಳು (ಯಲಹಂಕ ವಲಯ) | ವಲಯ ಅರಣ್ಯಾಧಿಕಾರಿಗಳು (ಯಲಹಂಕ ವಲಯ) |
| 05 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಗ್ರಂಥಾಲಯದ ಕಟ್ಟಡ ಸೋರುತ್ತಿರುವುದರಿಂದ ಸದರಿ ಕಟ್ಟಡವನ್ನು ದುರಸ್ಥಿಗೊಳಿಸುವ ಬಗ್ಗೆ ಸಭೆಯಲ್ಲಿ ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ | ಸಹಾಯಕ ಅಬಿಯಂತರರು (ವಾರ್ಡ್ ನಂ-01) |

ಆ) ವಾರ್ಡ್ ನಂ-01ರಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿದ್ದು, ಬಿ.ಡಬ್ಲ್ಯೂ.ಎಸ್.ಎಸ್. ಬಿ ಇಲಾಖೆಯವರಿಗೆ ಕುಡಿಯುವ ನೀರು ಸರಬರಾಜು ಮಾಡುವ ಬಗ್ಗೆ ಈ ಕೆಳಕಂಡಂತೆ ಚರ್ಚಿಸಲಾಯಿತು

1. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ವೆಂಕಟಾಲ ಗ್ರಾಮದಲ್ಲಿ ಹೊಸದಾಗಿ ಬೊರ್‌ವೆಲ್ ಕೋರೆದು ನೀರು ಪೂರೈಸಬೇಕೆಂದು ಹಾಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಹಾಲಿ ಇರುವ ಸಂಪರ್ಕವನ್ನು ಕಡಿತಗೊಳಿಸಲಾಗಿದ್ದು, ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಸಭೆಯಲ್ಲಿ ಸೂಚಿಸಲಾಯಿತು.
2. ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ವೆಂಕಟಾಲ ಗ್ರಾಮದಲ್ಲಿ ಹೊಸದಾಗಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡಿದ್ದು, ಮಾನ್ಯ ಶಾಸಕರು ಯಲಹಂಕ ವಿಧಾನ ಸಭಾ ಕ್ಷೇತ್ರರವರು ಉದ್ಘಾಟನೆ ಮಾಡಿರುತ್ತಾರೆ. ಆದರೆ ಈ ಆರ್.ಒ ಪ್ಲಾಂಟ್‌ಗೆ ಬೋರ್‌ವೆಲ್‌ನಿಂದ ನೀರಿನ ಸಂಪರ್ಕ ನೀಡಿರುವುದಿಲ್ಲ. ಇದರ ಬಗ್ಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ಆಕ್ಷೇಪಣೆ ಸಲ್ಲಿಸಿದರು.
3. ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ಹಾಲಿ ಇರುವ ಬೊರ್‌ವೆಲ್‌ಗಳಲ್ಲಿ ರಾತ್ರೊ ರಾತ್ರಿ ಪಂಪ್ ಮೊಟಾರ್ ತೆಗೆಯುತ್ತಿರುವ ಬಗ್ಗೆ ಸ್ಥಳೀಯ ನಿವಾಸಿಗಳು ಅಕ್ಷೇಪಣೆ ವ್ಯಕ್ತಪಡಿಸಿದರು.
4. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ರೈತರ ಸಂತೆ ಮುಂಭಾಗದಲ್ಲಿರುವ ತರಕಾರಿ ಅಂಗಡಿಗಳನ್ನು ಮತ್ತು ತಳ್ಳುವ ಗಾಡಿಗಳನ್ನು ಮತ್ತು ಪಾದಚಾರಿ ಮಾರ್ಗಗಳಲ್ಲಿ ವ್ಯಾಪಾರ ಮಾಡುವವರ ಮೇಲೆ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಮನವಿ ಸಲ್ಲಿಸಿದರು.
5. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ವೆಂಕಟಾಲ ಲೇಕ್ ವೀಹ್ ಬಡಾವಣೆ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ. ಹಾಗೂ ಎರಡು ಕಂಪನಿಯವರಿಗೆ ಗುತ್ತಿಗೆ ನೀಡಿರುವುದರಿಂದ ಬೀದಿ ದೀಪಗಳ ನಿರ್ವಹಣೆ ಸರಿಯಾಗಿ ನಿರ್ವಹಿಸುತ್ತಿರುವುದಿಲ್ಲ ಎಂದು ಸ್ಥಳೀಯರು ಸಭೆಯಲ್ಲಿ ದೂರನ್ನು ಸಲ್ಲಿಸಿದರು.
6. ವಾರ್ಡ್ ನಂ-01ರಲ್ಲಿರುವ ಕೆ.ಹೆಚ್.ಬಿ ಕಾಲೋನಿಯಲ್ಲಿ ಬ್ಲಾಕ್ ಸ್ಪಾಟ್‌ಅಲ್ಲಿ ಕಸದ ರಾಶಿಇದ್ದು ತೆರವುಗೊಳಿಸುವಂತೆ ಹಾಗೂ ಪೌರ ಕಾರ್ಮಿಕರಿಗೆ ಕೈ ಗ್ಲೌಸ್‌ಗಳು ಹಾಗೂ ಮುಂಜಾಗ್ರತ ಕ್ರಮಗಳನ್ನು ಕೈಗೊಂಡಿರುವುದಿಲ್ಲ ಎಂದು ಯಲಹಂಕ ಹೊಸಬೀದಿ ನಿವಾಸಿಯಾದ ಶ್ರೀ.ಹೇಮರಾಜ್ ರವರು ಸಭೆಗೆ ದೂರನ್ನು ಸಲ್ಲಿಸಿದರು.
7. ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಸುರಬಿ ಬಡಾವಣೆ ಮುನೇಶ್ವರ ದೇವಸ್ಥಾನದ ಹತ್ತಿರ ಕುಡಿಯುವ ನೀರಿನ ಸಂಪರ್ಕದ ಪೈಪ್‌ಗಳನ್ನು ಚರಂಡಿಯಲ್ಲಿ ಅಳವಡಿಸಿರುವ ಬಗ್ಗೆ ಹಾಗೂ ಯಲಹಂಕ ಬಾಂಗ್ಲಾ ಶಾಲೆಯ ಹತ್ತಿರ ಶುದ್ಧ ಕುಡಿಯುವ ನೀರಿನ ಸಂಪರ್ಕ ಘಟಕದಲ್ಲಿ ರೂ. 5.00 ಕಾಯಿನ್ ರ ಬದಲಾಗಿ ಸಾರ್ವಜನಿಕರ ಹತ್ತಿರ ರೂ. 8.00 ವಸೂಲಿ ಮಾಡುತ್ತಿರುವುದಾಗಿ ಶ್ರೀ. ಹೇಮರಾಜ್ ರವರು ಸಭೆಗೆ ದೂರನ್ನು ಸಲ್ಲಿಸಿರುತ್ತಾರೆ.

8. ಅಂಗಡಿಗಳಿಗೆ ಆರೋಗ್ಯ ಇಲಾಖೆಯಿಂದ ಪರವಾನಗಿ ನೀಡುತ್ತಿರುವುದಿಲ್ಲ ಎಂದು ಹಾಗೂ ಪ್ಲಾಸ್ಟಿಕ್ ಅನ್ನು ಸೀಸ್ ಮಾಡುತ್ತಿಲ್ಲವೆಂದು ಶ್ರೀ. ಹೇಮರಾಜ್ ರವರು ಸಭೆಗೆ ದೂರನ್ನು ಸಲ್ಲಿಸಿರುತ್ತಾರೆ.
9. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಸಾರ್ವಜನಿಕರಿಗೆ ಕುಡಿಯುವ ನೀರನ್ನು ಸಮರ್ಪಕವಾಗಿ ಪೂರೈಸದೆ ಇದ್ದಲ್ಲಿ ಧರಣಿ ಮಾಡುವುದಾಗಿ ವೆಂಕಟಾಲ ಗ್ರಾಮದ ಸಾರ್ವಜನಿಕರು ದೂರನ್ನು ಸಲ್ಲಿಸಿದರು.
10. ಡಾ. ಶಾಲಿನಿಯವರು (ಎ.ಪಿ.ಟಿ.ಎಸ್. ಕೋವಿಡ್ ವೈದ್ಯಾಧಿಕಾರಿಗಳು) ರವರು ಮಾತನಾಡಿ ಕೋವಿಡ್ ಪರೀಕ್ಷೆಗೆ ಸಂಬಂದಿಸಿದಂತೆ, ಸಾರ್ವಜನಿಕರು ಆಸಕ್ತಿ ತೋರಿಸುತ್ತಿರುವುದಿಲ್ಲ ವೆಂದು ಹಾಗೂ ನಮಗೆ ಪ್ರತಿದಿನ 320 ಜನ ಟಾರ್ಗೇಟ್ ನೀಡುತ್ತಿದ್ದು, ವಾರ್ಡ್ ನಂ-01 ಮತ್ತು 02 ರಲ್ಲಿರುವ ಸಾರ್ವಜನಿಕರು ಕೊವಿಡ್ ಪರೀಕ್ಷೆ ಮಾಡಿಸಿಕೊಳ್ಳಲು ಮನವೊಲಿಕೆ ಮಾಡುವಂತೆ ಸಭೆಯಲ್ಲಿ ಮನವಿ ಸಲ್ಲಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಢ)

ಪ್ರತಿಯನ್ನು:
ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ವಲಯ ಅರಣ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬೃ.ನಿ.ಗಾ) ವಿಭಾಗ ರವರ ಮಾಹಿತಿಗಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.